ಕರ್ನಾಟಕ ಸರ್ಕಾರ

ಸಂಖ್ಯೆ : ಗ್ರಾಅಪ/17/ಜೈಅಯೋ/2013

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ : 29.10.2013

ಇವರಿಂದ;

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,

ಇವರಿಗೆ;

ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೇ,

ವಿಷಯ : 2013-14ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಮತ್ತು ಮ್ಯಾನುರ ಮ್ಯಾನೇಜ್‌ಮೆಂಟ್ ಕಾರ್ಯಕ್ರಮದಡಿ (ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮ) ಆಡಳಿತಾತ್ಮಕ ಮಂಜೂರಾತಿ ನೀಡುವ ಕುರಿತು.

ಉಲ್ಲೇಖ :
1. ಕೇಂದ್ರ ಸರ್ಕಾರದ ಪತ್ರ ಸಂ: 5-5/2009-ಬಿಇ, ದಿನಾಂಕ: 27.09.2009.
2. ಕೇಂದ್ರ ಸರ್ಕಾರದ ಪತ್ರ ಸಂ: 5-1/2012-ಬಿಇ, ದಿನಾಂಕ: 09.07.2012
3. ಸರ್ಕಾರದ ಪತ್ರ ಸಂ: ಗ್ರಾಅಪ 35 ಜೈಅಯೋ 2010, ದಿನಾಂಕ: 28.09.2010.
4. ಕೇಂದ್ರ ಸರ್ಕಾರದ ಪತ್ರ ಸಂ: ಎಫ್ ನಂ. 5-1/2013 ಬಿಇ, ದಿನಾಂಕ: 22.05.2013

***

ಉಲ್ಲೇಖಿತ (1) ರ ಪತ್ರದನ್ವಯ ಕೇಂದ್ರ ಸರ್ಕಾರದ ನವ ಮತ್ತು ನವೀಕರಿಸಬಹುದಾದ ಇಂಧನ ಮಂತ್ರಾಲಯವು ಉಲ್ಲೇಖಿತ (4) ರ ಪತ್ರದಲ್ಲಿ 2013-14ನೇ ಸಾಲಿಗೆ ರಾಷ್ಟ್ರೀಯ ಜೈವಾನಿಲ ಮತ್ತು ಮ್ಯಾನುರ ಮ್ಯಾನೇಜ್‌ಮೆಂಟ್ ಕಾರ್ಯಕ್ರಮದಡಿ (ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಕಾರ್ಯಕ್ರಮ) ಮುಂದುವರಿಸಲಾಗಿದೆ ಎಂದು ತಿಳಿಸಲಾಗಿರುವ ನಿಟ್ಟಿನಲ್ಲಿ ರಾಷ್ಟ್ರೀಯ ಜೈವಾನಿಲ ಮತ್ತು ಮ್ಯಾನುರ ಮ್ಯಾನೇಜ್‌ಮೆಂಟ್ ಕಾರ್ಯಕ್ರಮವನ್ನು 2013-14ನೇ ಸಾಲಿಗೆ ಮುಂದುವರಿಸಲಾಗಿದೆ.

ಉಲ್ಲೇಖಿತ (3) ರಲ್ಲಿ ನೀಡಲಾದ ಆಡಳಿತಾತ್ಮಕ ಮಂಜೂರಾತಿಯಲ್ಲಿನ ಅಂಶಗಳನ್ನೇ ಪ್ರಸಕ್ತ ಸಾಲಿಗೂ ಸಹ ಮುಂದುವರಿಸಿ ಆದೇಶಿಸಲಾಗಿದೆ ಹಾಗೂ ಇದರಲ್ಲಿನ ಈ ಕೆಳಕಂಡ ಅಂಶಗಳನ್ನು ಮಾತ್ರ ಪರಿಷ್ಕರಿಸಲಾಗಿದೆ.

2. ಭೌತಿಕ ಗುರಿ

ಕೇಂದ್ರ ಸರ್ಕಾರದ ಪತ್ರದಲ್ಲಿ 2013–14ನೇ ಸಾಲಿಗೆ ರಾಷ್ಟ್ರೀಯ ಜೈವಾನಿಲ ಮತ್ತು ಮ್ಯಾನುರ ಮ್ಯಾನೇಜ್‌ಮೆಂಟ್ ಕಾರ್ಯಕ್ರಮದಡಿ 10,300 (300 ಸಂಖ್ಯೆಯ SC Comp. ಗುರಿಯನ್ನೊಳಗೊಂಡಂತೆ) ಜೈವಾನಿಲ ಸ್ಥಾವರಗಳ ಭೌತಿಕ ಗುರಿಯನ್ನು ರಾಜ್ಯಕ್ಕೆ ನಿಗದಿಪಡಿಸಲಾಗಿದ್ದು, ಈಗಾಗಲೇ ವಾರ್ಷಿಕ ಭೌತಿಕ ಗುರಿಗಳನ್ನು ಜಿಲ್ಲಾ ಪಂಚಾಯಿತಿಗಳಿಗೆ ಹಂಚಿಕೆ ಮಾಡಲಾಗಿದೆ.

3. ಕಾರ್ಯಕ್ರಮದಡಿ ಮಾಸಿಕ ಪ್ರಗತಿ ವರದಿ ಹಾಗೂ ತ್ರೈಮಾಸಿಕ / ಮಾಸಿಕ ಪ್ರಗತಿ ವರದಿಗಳನ್ನು ನಿಗದಿತ ಅವಧಿಯೊಳಗೆ ಅಂದರೆ ಪ್ರತಿ ಮಾಹೆ 5ನೇ ತಾರೀಖಿನೊಳಗೆ ಸಲ್ಲಿಸತಕ್ಕದ್ದು (ನಮೂನೆಗಳನ್ನು ಇದರೊಂದಿಗೆ ಲಗತ್ತಿಸಿದೆ).

4. ಆಯಾ ಜಿಲ್ಲಾ ಪಂಚಾಯತ್‌ಗಳಿಗೆ ಹಂಚಿಕೆ ಮಾಡಲಾದ ಭೌತಿಕ ಗುರಿಯನ್ವಯ ಪೂರ್ಣ ಪ್ರಮಾಣದಲ್ಲಿ ತಪ್ಪದೇ ಪ್ರಗತಿ ಸಾಧಿಸುವುದು.

5. ಆಯಾ ಜಿಲ್ಲೆಯಲ್ಲಿ ಜೈವಾನಿಲ ಸ್ಥಾವರದ ನಿರ್ಮಾಣದ ಸಾಮರ್ಥ್ಯದನುಸಾರ ಆರ್ಥಿಕ ಸಾಲುಗಳಲ್ಲಿ ಅನುದಾನವನ್ನು ಹಂಚಿಕೆ ಮಾಡಿಕೊಳ್ಳಲು ಕ್ರಮವಹಿಸುವುದು.

6. 2013–14 ನೇ ಸಾಲಿನಲ್ಲಿ ಸದರಿ ಕಾರ್ಯಕ್ರಮವು ಜಿಲ್ಲಾ ಪಂಚಾಯತ್ ಕಾರ್ಯಕ್ರಮವಾಗಿರುತ್ತದೆ. ಪೂರ್ಣಗೊಂಡ ಜೈವಾನಿಲ ಸ್ಥಾವರಗಳ ಕೇಂದ್ರ ಸಹಾಯ ಧನ ಪಾವತಿಯನ್ನು ಜಿಲ್ಲಾ ಪಂಚಾಯತ್ ಯೋಜನಾ ಅಭಿಯಂತರರು ಶೇ. 100% ಸ್ಥಾವರಗಳನ್ನು ಪರಿಶೀಲಿಸಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ವರದಿ ಸಲ್ಲಿಸತಕ್ಕದ್ದು. ಕಾರ್ಯಕ್ರಮ ಉಸ್ತುವಾರಿ ಇರುವ ಅಧಿಕಾರಿಯು (ಉಪ ಕಾರ್ಯದರ್ಶಿ [ಅಭಿವೃದ್ಧಿ] / ಯೋಜನಾ ನಿರ್ದೇಶಕರು) ಶೇ. 10% ಸ್ಥಾವರಗಳನ್ನು ರ್‍ಯಾಂಡಮ್ ಪರಿಶೀಲನೆ ಮಾಡತಕ್ಕದ್ದು.

7. ಹಣಬಳಕೆ ಪ್ರಮಾಣ ಪತ್ರ ಹಾಗೂ ಕ್ಲೇಮುಗಳನ್ನು ದೃಢೀಕರಣದೊಂದಿಗೆ ನಿಗದಿತ ನಮೂನೆಯಲ್ಲಿ ಸಲ್ಲಿಸುವುದು.

8. ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಆದೇಶ ಸುತ್ತೋಲೆಗಳನ್ವಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳುವುದು.

ತಮ್ಮ ವಿಶ್ವಾಸಿ,

Hemalatha P

(ಪಿ. ಹೇಮಲತ)
ನಿರ್ದೇಶಕರು (ಗ್ರಾಮೂಸೌ–2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2. ಎಲ್ಲಾ ಜಿಲ್ಲಾ ಪಂಚಾಯತ್‌ನ ಉಪಕಾರ್ಯದರ್ಶಿ (ಅಭಿವೃದ್ಧಿ) ಮತ್ತು ಮುಖ್ಯ ಲೆಕ್ಕಾಧಿಕಾರಿಗಳು.

3. ನಿರ್ದೇಶಕರು, ಕೃಷಿ ನಿರ್ದೇಶನಾಲಯ, ಶೇಷಾದ್ರಿರಸ್ತೆ, ಬೆಂಗಳೂರು.
4. ಎಲ್ಲಾ ಜಿಲ್ಲೆಯ ಜಂಟಿ ಕೃಷಿ ಅಧಿಕಾರಿಗಳಿಗೆ.
5. ಉಪಜನರಲ್ ಮ್ಯಾನೇಜರ್, ನಬಾರ್ಡ್, ಜೀವನ ಪ್ರಕಾಶ್ ಅನೆಕ್ಸ 113:1; ಜೆ.ಸಿ. ರಸ್ತೆ, ಬೆಂಗಳೂರು 560 024.
6. ಸಮನ್ವಯ ಅಧಿಕಾರಿ, ಪ್ರದೇಶಿಕ ಜೈವಾನಿಲ ಅಭಿವೃದ್ಧಿ ತರಬೇತಿ ಕೇಂದ್ರ ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು – 560 024.
7. ವಿಶೇಷಾಧಿಕಾರಿಗಳು (ಜಿಲ್ಲಾ ಪಂಚಾಯತ್) ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
8. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9. ನಿರ್ದೇಶಕರು, ಪಿಎಂಐ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಗ್ರಾ.ಅ. ಮತ್ತು ಪಂಚಾಯತ್ ರಾಜ್ ಇಲಾಖೆ.
11. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ.
12. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.